ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 712 |
| ಸದಸ್ಯರ ಹೆಸರು | : | ಶ್ರೀ ಎಂ ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21-02-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಅ.ನಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಲೋಕೋಪಯೋಗಿ ಇಲಾಖೆ ವತಿಯಿಂದ ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ Peripheral Road ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಹಾಗಿದ್ದಲ್ಲಿ, ಸದರಿ ಕಾರ್ಯಕ್ಕೆ ಯಾವಾಗ ಚಾಲನೆ ನೀಡಲಾಗುವುದು; | ಬೆಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ Peripheral Road ನಿರ್ಮಾಣವನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಂಡಿರುವುದಿಲ್ಲ. |
| (ಆ) | ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಭಾಗದಲ್ಲಿ ಲೋಕೋಪಯೋಗಿ ಇಲಾಖೆಯಿಂದ Express Way / Elevated Corridor ನಿರ್ಮಿಸಲು ಯೋಜಿಸಲಾಗಿದೆಯೇ ಹಾಗಿದ್ದಲ್ಲಿ ಈ ಕುರಿತು ರೂಪರೇಷ ತಯಾರಿಸಲಾಗಿದೆಯೇ; | ಕಿತ್ತೂರು ಕರ್ನಾಟಕದಲ್ಲಿ ಪಣಜಿ-ಹೈದ್ರಾಬಾದ್ ರಸ್ತೆಯು ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ವ್ಯಾಪ್ತಿಯಲ್ಲಿ ಹಾದು ಹೋಗುತ್ತಿದ್ದು, ಕರ್ನಾಟಕದಲ್ಲಿ ಬೆಳಗಾವಿ, ರಾಯಚೂರು ಜಿಲ್ಲೆಗಳಲ್ಲಿ ಹಾದು ಹೋಗುತ್ತದೆ.<br><br>**<u>ಕಲ್ಯಾಣ ಕರ್ನಾಟಕ</u>**<br>ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಸೂರತ್-ಚನ್ನೈ Express Way ಕೈಗೊಳ್ಳಲಾಗುತ್ತಿದ್ದು, ಸದರಿ ರಸ್ತೆಯು ಕರ್ನಾಟಕದಲ್ಲಿ ಕಲಬುರ್ಗಿ-ಯಾದಗಿರಿ-ರಾಯಚೂರು ಜಿಲ್ಲೆಗಳಲ್ಲಿ ಹಾದು ಹೋಗುತ್ತದೆ.<br><br>**<u>ಕಿತ್ತೂರು ಕರ್ನಾಟಕ</u>**<br>ಬೆಳಗಾವಿಯಲ್ಲಿ ರಾಷ್ಟ್ರೀಯ ಹೆದ್ದಾರಿ 48 ರಿಂದ ಕಿತ್ತೂರು ರಾಣಿ ಚೆನ್ನಮ್ಮ ಸರ್ಕಲ್‌ವರೆಗೆ ಅಶೋಕ ಸರ್ಕಲ್ ಮೂಲಕ ರಾಷ್ಟ್ರೀಯ ಹೆದ್ದಾರಿ 48 (ರಾಷ್ಟ್ರೀಯ ಹೆದ್ದಾರಿ-4) ಸೇರುವ ರಾಷ್ಟ್ರೀಯ ಹೆದ್ದಾರಿಗೆ Elevated Corridor ನಿರ್ಮಿಸಲು ಯೋಜಿಸಲಾಗಿದ್ದು, ಯೋಜನಾ ವರದಿಯನ್ನು ರೂ.450.67 ಕೋಟಿಗಳಿಗೆ Chief General Manager (Tech), NHAI, Delhi ರವರಿಗೆ ಮುಖ್ಯ ಇಂಜಿನೀಯರ್, ರಾಷ್ಟ್ರೀಯ ಹೆದ್ದಾರಿ, ಬೆಂಗಳೂರು ರವರು ದಿನಾಂಕ: 22-11-2023 ರಲ್ಲಿ ಸಲ್ಲಿಸಿರುತ್ತಾರೆ. ಅಲ್ಲದೆ, ರಾಜ್ಯ ಸರ್ಕಾರದ ವತಿಯಿಂದಲೂ ಈ Elevated ರಸ್ತೆಯನ್ನು ನಿರ್ಮಿಸಲು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯಕ್ಕೆ ಪ್ರಸ್ತಾವನೆಯನ್ನು ದಿನಾಂಕ: |
| (ಇ) | ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಭಾಗದಲ್ಲಿ Express Way/Elevated Corridor ನಿರ್ಮಿಸಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಅನುದಾನಕ್ಕೆ ಪ್ರಸ್ತಾಪ ಸಲ್ಲಿಸಿವೆಯೇ ಸಲ್ಲಿಸಿದ್ದಲ್ಲಿ ನಮ್ಮ ರಾಜ್ಯದ ಪ್ರಸ್ತಾಪವು ಯಾವ ಹಂತದಲ್ಲಿದೆ. | |

| | | |
|---|---|---|
| | | 20-12-2023 ರಂದು ಸಲ್ಲಿಸಲಾಗಿದ್ದು, ಅದರಲ್ಲಿ ರಾಜ್ಯ ಸರ್ಕಾರದಿಂದ ಈಗಾಗಲೇ ಸದರಿ ಕಾಮಗಾರಿಯ ರಾಜಧನ ಮತ್ತು ಎಸ್.ಜಿ.ಎಸ್.ಟಿ. ಮೊತ್ತದ ಬದಲಿಗೆ ರೂ.27.62 ಕೋಟಿಗಳನ್ನು ಭರಿಸಲು ಒಪ್ಪಿಗೆ ನೀಡಿ, ಕಾಮಗಾರಿಯನ್ನು ಕೈಗೊಳ್ಳಲು ಕೋರಲಾಗಿದೆ. |

ಕಡತ ಸಂಖ್ಯೆ: ಲೋಇ 57 ಸಿಎನ್‌ಹೆಚ್ 2024

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು